ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 :** **ಜುಲೈ 28, 2020**

# ಪತ್ರಿಕಾ ಪ್ರಕಟಣೆ

## ಮುಖ್ಯಮಂತ್ರಿಗಳಿಂದ "ಶಿವಪದ ರತ್ನಕೋಶ" ಗ್ರಂಥ ಲೋಕಾರ್ಪಣೆ

ಬೆಂಗಳೂರು, ಜುಲೈ 28 (ಕರ್ನಾಟಕ ವಾರ್ತೆ):

ಮೈಸೂರಿನ ಜಗದ್ಗುರು ಶಿವರಾತ್ರೀಶ್ವರ ಮಹಾವಿದ್ಯಾಪೀಠ ಹೊರತಂದಿರುವ "ಶಿವಪದ ರತ್ನಕೋಶ" ಗ್ರಂಥವನ್ನು ಮುಖ್ಯಮಂತ್ರಿ ಬಿ ಎಸ್.ಯಡಿಯೂರಪ್ಪ ಅವರು ಇಂದು ಆನ್ ಲೈನ್ ಮೂಲಕ ಬಿಡುಗಡೆ ಮಾಡಿದರು.

ನಂತರ ಮಾತನಾಡಿದ ಅವರು ಶಿವಪದ ರತ್ನಕೋಶವು ಶೈವಾಗಮಗಳು, ವಚನ ಸಾಹಿತ್ಯ, ವೀರಶೈವ ಕಾವ್ಯ, ಅಪರೂಪದ ರೂಢಿಯ ಪದಗಳನ್ನು ಒಳಗೊಂಡು ರೂಪುಗೊಂಡಿದೆ. ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ಗೌರವ ಸಂಪಾದಕತ್ವದಲ್ಲಿ ಹಾಗೂ ವಿಜಯಪುರ ಜ್ಞಾನಯೋಗಾಶ್ರಮದ ಪೂಜ್ಯ ಶ್ರೀ ಸಿದ್ದೇಶ್ವರ ಸ್ವಾಮಿಗಳ ಮಾರ್ಗದರ್ಶನದಲ್ಲಿ ಮೂಡಿಬಂದಿರುವ ಈ ಗ್ರಂಥವು ಶಿವಧರ್ಮ, ಸಂಸ್ಕೃತಿ, ಸಿದ್ಧಾಂತಗಳನ್ನು ಯಥಾವತ್ತಾಗಿ ಪರಿಚಯಿಸುವ ಸಾವಿರ ಪುಟಗಳ ಬೃಹತ್ ಪದ ಭಂಡಾರವಾಗಿದೆ. ಜಗದ್ಗುರು ಶ್ರೀ ಶಿವರಾತ್ರೀಶ್ವರ ಗ್ರಂಥಮಾಲೆಯೂ ಸೇರಿದಂತೆ ಸುಮಾರು 300ಕ್ಕೂ ಹೆಚ್ಚು ಮೌಲಿಕ ಗ್ರಂಥಗಳನ್ನು ಪ್ರಕಟಿಸಿರುವ ಕೀರ್ತಿ ಸಂಸ್ಥೆಗೆ ಸಲ್ಲುತ್ತದೆ.

ಕರ್ನಾಟಕದ ಜನರ ಬದುಕಿನಲ್ಲಿ ಮಠಪೀಠಗಳ ಪಾತ್ರ, ಪ್ರಭಾವ ಅಗಾಧವಾದುದು. ವಿದ್ವತ್ಪೂರ್ಣವೂ, ಪರಿಶ್ರಮದಾಯಕವೂ ಆದ ಈ ಮಹತ್ಕಾರ್ಯವನ್ನು ನೆರವೇರಿಸಿದ ಸುತ್ತೂರು ಶ್ರೀಮಠಕ್ಕೆ ಹಾಗೂ ಸಂಪಾದಕ ಮಂಡಳಿಗೆ ಅಭಿನಂದಿಸಿದ ಮುಖ್ಯಮಂತ್ರಿಗಳು ಈ ಅಮೂಲ್ಯ ಸಂಪತ್ತಿನ ಸದುಪಯೋಗವನ್ನು ಕನ್ನಡಿಗರು ಪಡೆಯಲಿ ಎಂದರು.

ಸಭೆಯಲ್ಲಿ ಸುತ್ತೂರು ಮಠದ ಜೆ.ಎಸ್.ಎಸ್ ಮಹಾವಿದ್ಯಾಪೀಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು, ವಿಜಯಪುರ ಜ್ಞಾನಯೋಗಾಶ್ರಮದ ಶ್ರೀ ಸಿದ್ದೇಶ್ವರ ಸ್ವಾಮಿಗಳು, ತುಮಕೂರಿನ ಸಿದ್ದಗಂಗಾ ಮಠದ ಶ್ರೀ ಸಿದ್ಧಲಿಂಗಾಸ್ವಾಮಿಗಳು, ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಪ್ರವಾಸೋದ್ಯಮ ಸಚಿವ ಸಿ.ಟಿ. ರವಿ, ಗೃಹ ಸಚಿವ ಬಸವರಾಜ ಬೊಮ್ಮಾಯಿ,ಸಂಸದ ಪ್ರತಾಪ್ ಸಿಂಹ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಶಂಕರ ಗೌಡ ಪಾಟೀಲ್ ಉಪಸ್ಥಿತರಿದ್ದರು.

**ಛಾಯಾಚಿತ್ರ ಲಗತ್ತಿಸಿದೆ)**

## ಮೈಕ್ರೋಸಾಫ್ಟ್ ಕಂಪನಿಯ ವತಿಯಿಂದ ಆರ್.ಟಿ. ಪಿ.ಸಿ.ಆರ್. ಟಿ ಪರೀಕ್ಷಾ ಯಂತ್ರಗಳ ಕೊಡುಗೆ

ಬೆಂಗಳೂರು, ಜುಲೈ 28 (ಕರ್ನಾಟಕ ವಾರ್ತೆ):

ಮೈಕ್ರೋಸಾಫ್ಟ್ ಕಂಪನಿಯ ವತಿಯಿಂದ ಇಂದು ಮೂರು ಆರ್.ಟಿ. ಪಿ.ಸಿ.ಆರ್. ಟಿ ಪರೀಕ್ಷಾ ಯಂತ್ರಗಳನ್ನು ಕೊಡುಗೆ ನೀಡಿಲಾಯಿತು. ಈ ಸಂಬಂಧ ವರ್ಚುಯಲ್ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಖಾಸಗಿ ಕಂಪನಿಗಳು ಕೋವಿಡ್ 19 ರ ವಿರುದ್ಧದ ಹೋರಾಟದಲ್ಲಿ ಸರ್ಕಾರದೊಂದಿಗೆ ಕೈಜೋಡಿಸಿರುವುದು ಸ್ವಾಗತಾರ್ಹ ಎಂದು ತಿಳಿಸಿ, ಕೋವಿಡ್ 19 ಸಾಂಕ್ರಾಮಿಕವನ್ನು ನಿಯಂತ್ರಿಸಲು ಸಾರ್ವಜನಿಕರು ಸೇರಿದಂತೆ ಪ್ರತಿ ಯೊಬ್ಬರೂ ಸಹಕರಿಸಬೇಕು ಎಂದರು.

ಸಭೆಯಲ್ಲಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ, ಗೃಹ ಸಚಿವ ಬಸವರಾಜ ಬೊಮ್ಮಾಯಿ, ಪ್ರವಾಸೋದ್ಯಮ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಸಿ.ಟಿ. ರವಿ, ಮೈಕ್ರೋಸಾಫ್ಟ್ ಕಂಪನಿಯ ಕಾರ್ಪೊರೇಟ್ ಉಪಾಧ್ಯಕ್ಷ ಹಾಗೂ ವ್ಯವಸ್ಥಾಪಕ ನಿರ್ದೇಶಕ ರಾಜೀವ್ ಕುಮಾರ್, ಸಿಬ್ಬಂದಿ ಮುಖ್ಯಸ್ಥ ಸಂದೀಪ್ ಶ್ರೀವಾಸ್ತವ್, ಹಣಕಾಸು ವಿಭಾಗದ ನಿರ್ದೇಶಕ ಅಮರೇಶ್ ರಾಮಸ್ವಾಮಿ, ಅರವಿಂದ ಪ್ರಕಾಶ್ ಉಪಸ್ಥಿತರಿದ್ದರು.

**ಛಾಯಾಚಿತ್ರ ಲಗತ್ತಿಸಿದೆ)**

## ಪುಸ್ತಕಗಳ ಆಯ್ಕೆಗೆ ಅರ್ಜಿ ಸಲ್ಲಿಸುವ ದಿನಾಂಕ ವಿಸ್ತರಣೆ

ಬೆಂಗಳೂರು, ಜುಲೈ 28 (ಕರ್ನಾಟಕ ವಾರ್ತೆ):

ಪರಿಶಿಷ್ಟ ಜಾತಿ ಉಪಯೋಜನೆ ಮತ್ತು ಗಿರಿಜನ ಉಪಯೋಜನೆ ಅಡಿಯಲ್ಲಿ 2020 ರಲ್ಲಿ ಪ್ರಥಮವಾಗಿ ಮುದ್ರಣಗೊಂಡು ಪ್ರಕಟವಾದ ಕನ್ನಡ ಸಾಹಿತ್ಯ, ಪರಾಮರ್ಶನ, ಸ್ಪರ್ಧಾತ್ಮಕ, ಪಠ್ಯ ಪುಸ್ತಕ ಹಾಗೂ ಮಕ್ಕಳ ಪುಸ್ತಕ, ವಿಶ್ವಕೋಶಗಳು, ಕಾನೂನು, ವಿಜ್ಞಾನ, ತಂತ್ರಜ್ಞಾನ, ಜ್ಞಾನ ಪೀಠ ಪ್ರಶಸ್ತಿ ವಿಜೇತ ಸಾಹಿತಿಗಳ ಪುಸ್ತಕಗಳು ಹಾಗೂ ಕೃಷಿ ವಿಜ್ಞಾನಕ್ಕೆ ಸಂಬಂಧಿಸಿದ ಕನ್ನಡ ಮತ್ತು ಆಂಗ್ಲ ಪುಸ್ತಕಗಳನ್ನು ಮೀಸಲು

ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಂಥಾಲಯಗಳಿಗೆ ಖರೀದಿಸುವ ಕುರಿತು ವಿವಿಧ ಲೇಖಕ ಪ್ರಕಾಶಕರಿಂದ/ಪ್ರಕಟಣ ಸಂಸ್ಥೆಗಳು/ಸರಬರಾಜುದಾರರಿಂದ ನಿಗದಿತ ಅರ್ಜಿ ನಮೂನೆಯಲ್ಲಿ ಆಯ್ಕೆಗಾಗಿ ಪುಸ್ತಕಗಳನ್ನು ಸಲ್ಲಿಸುವ ದಿನಾಂಕವನ್ನು 10ನೇ ಆಗಸ್ಟ್ 2020 ರವರೆಗೆ ವಿಸ್ತರಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬೆಂಗಳೂರು ಉತ್ತರ ವಿಶ್ವವಿದ್ಯಾಲಯದಿಂದ ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 28 (ಕರ್ನಾಟಕ ವಾರ್ತೆ):

ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು, 2020-21ನೇ ಸಾಲಿಗೆ ವಿಶ್ವವಿದ್ಯಾಲಯದ ಭೌಗೋಳಿಕ ವ್ಯಾಪ್ತಿಯಲ್ಲಿ, ಬರುವ ಕೋಲಾರ ಜಿಲ್ಲೆ, ಚಿಕ್ಕಬಳ್ಳಾಪುರ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ, ದೇವನಹಳ್ಳಿ ಮತ್ತು ದೊಡ್ಡಬಳ್ಳಾಪುರ, ವಿಧಾನಸಭಾ ಕ್ಷೇತ್ರಗಳು ಹಾಗು ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯ, ಕೆ.ಆರ್.ಪುರ ಸಿ.ವಿ.ರಾಮನ್‌ನಗರ, ಪುಲಕೇಶಿನಗರ, ಮಹದೇವಪುರ, ಸರ್ವಜ್ಞನಗರ, ವಿಧಾನಸಭಾ ಕ್ಷೇತ್ರಗಳನೊಳಗೊಂಡ ಕಾಲೇಜುಗಳು ಮತ್ತು ಅರ್ಹ ಶಿಕ್ಷಣ ಸಂಸ್ಥೆಗಳಿಂದ ವಿವಿಧ ರೀತಿಯ ಸಂಯೋಜನೆಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ ಪ್ರಕರಣ 59 ಮತ್ತು 62ರಡಿಯಲ್ಲಿ, ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆನ್‌ಲೈನ್ ಮೂಲಕ ಸಂಯೋಜನೆ ಮುಂದುವರೆಕೆ / ಹೊಸ ಸಂಯೋಜನೆ/ ಮುಂತಾದ ವಿವಿಧ ಸಂಯೋಜನೆಗೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕವನ್ನು ನಿಗಧಿಪಡಿಸಿದೆ

ದಂಡ ಶುಲ್ಕವಿಲ್ಲದೆ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಅಫ್‌ಲೋಡ್ ಮಾಡಿ ಮುದ್ರಿತ ಪ್ರತಿಗಳನ್ನು **ದಿನಾಂಕ: 08.08.2020** ರೊಳಗೆ ವಿಶ್ವವಿದ್ಯಾಲಯಕ್ಕೆ ಸಲ್ಲಿಸಬೇಕಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾಲಯ ವೆಬ್‌ಸೈಟ್: http://bnu.ac.in ಅನ್ನು ನೋಡಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬಾಲಭವನದಲ್ಲಿ ಆನ್‌ಲೈನ್ ಮುಖಾಂತರ ಉಚಿತವಾಗಿ ಚಟುವಟಿಕೆ ಪ್ರಾರಂಭ

ಬೆಂಗಳೂರು, ಜುಲೈ 28 (ಕರ್ನಾಟಕ ವಾರ್ತೆ):

ಕೋವಿಡ್-19 ಪ್ರಯುಕ್ತ, ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಹಾಗೂ ಮಕ್ಕಳ ಸುರಕ್ಷತೆಯ ನಿಟ್ಟಿನಲ್ಲಿ, ಬಾಲಭವನವು 10-15 ವರ್ಷದೊಳಗಿನ ಮಕ್ಕಳಿಗೆ ದಿನಾಂಕ 25-07-2020 ರಿಂದ ದಿನಾಂಕ 27-12-2020 ರವರೆಗೆ ಪ್ರತಿ ಶನಿವಾರ ಮತ್ತು ಭಾನುವಾರಗಳಂದು ಮಧ್ಯಾಹ್ನ 03.00 ರಿಂದ ಸಂಜೆ. 04.00 ರವರೆಗೆ ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳಾದ ಮನೆಯಲ್ಲೇ ಮಾಸ್ಕ್ ತಯಾರಿಕೆ, ಚಿತ್ರಕಲೆ, ಕರಕುಶಲೆ, ಜೇಡಿಮಣ್ಣಿನ ಕಲೆ, ಕಥೆ, ಕವನ, ಪ್ರಬಂಧ, ಬರೆಯುವುದು ಮತ್ತು ವಾಚಿಸುವುದು, ನೃತ್ಯ, ಸಂಗೀತ, ನಾಟಕ, ಯೋಗ, ವಿಜ್ಞಾನ, ಆರ್ಗಾನಿಕ್ ಹ್ಯಾಂಡ್ ವಾಷ್ ತಯಾರಿಕೆ ಇತ್ಯಾದಿ ಕ್ಷೇತ್ರದಲ್ಲಿ ಆನ್‌ಲೈನ್ ಮುಖಾಂತರ ಉಚಿತವಾಗಿ ಚಟುವಟಿಕೆ ಪ್ರಾರಂಭಿಸಿದೆ.

ಆಸಕ್ತ ಮಕ್ಕಳು ಆನ್‌ಲೈನ್ ಮೂಲಕ ಏರ್ಪಡಿಸಿರುವ ಚಟುವಟಿಕೆಯಲ್ಲಿ ಭಾಗವಹಿಸಲು ಅನುವಾಗುವಂತೆ ಒಂದು ಪಾಸ್‌ಪೋರ್ಟ್ ಅಳತೆಯ ಭಾವಚಿತ್ರದೊಂದಿಗೆ ಪೂರ್ಣ ವಿವರಗಳನ್ನು ಇ–ಮೇಲ್ ಐ ಡಿ secy.balbhavan.bng@gmail.com ಮೂಲಕ ಅರ್ಜಿ ಸಲ್ಲಿಸಲು ಕೋರಿದೆ.

ಹೆಚ್ಚಿನ ವಿವರಗಳಿಗೆ ಕಾರ್ಯದರ್ಶಿ ಕಛೇರಿ, ಬಾಲ ಭವನ ಸೊಸೈಟಿ, ಕಬ್ಬನ್ ಉದ್ಯಾನವನ, ಬೆಂಗಳೂರು, ಇಲ್ಲಿ ಅಥವಾ ದೂರವಾಣಿ ಸಂಖ್ಯೆ 080–22864189 ಮೂಲಕ ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

**ಕಳಸಾ ಬಂಡೂರ ಕುಡಿಯುವ ನೀರಿನ ಯೋಜನೆ ಅನುಷ್ಠಾನಕ್ಕೆ ಆಡಳಿತಾತ್ಮಕ ಒಪ್ಪಿಗೆ ನೀಡಿದ ಸರ್ಕಾರ : ರಮೇಶ್ ಜಾರಕಿಹೊಳಿ ಹರ್ಷ**

ಬೆಂಗಳೂರು, ಜುಲೈ 28 ( ಕರ್ನಾಟಕ ವಾರ್ತೆ ) :

ಬೆಳಗಾವಿ ಜಿಲ್ಲೆಯ ಖಾನಾಪುರ ತಾಲ್ಲೂಕಿನ ಕಣಕುಂಬಿ ಗ್ರಾಮದ ಬಳಿ ಮಹದಾಯಿ ನದಿಗೆ ಅಣೆಕಟ್ಟು ನಿರ್ಮಿಸಿ ಕೂಡು ಕಾಲುವೆ ಮುಖಾಂತರ 1.72 ಟಿ ಎಂ ಸಿ ನೀರನ್ನು ಕುಡಿಯುವ ನೀರಿನ ಉದ್ದೇಶಕ್ಕಾಗಿ ಮಲಪ್ರಭಾ ನದಿಗೆ ತಿರುಗಿಸುವ ಕಳಸಾ ನಾಲಾ ತಿರುವು ಯೋಜನೆಗೆ ರಾಜ್ಯ ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿದೆ.

ಬೆಳಗಾವಿ ಜಿಲ್ಲೆಯ ಖಾನಾಪುರ ತಾಲ್ಲೂಕಿನ ನೆರಸೆ ಗ್ರಾಮದ ಬಳಿ ಬಂಡೂರ ಹಳ್ಳಕ್ಕೆ ಅಣೆಕಟ್ಟು ನಿರ್ಮಿಸಿ, ಕೂಡು ಕಾಲುವೆ ಮುಖಾಂತರ 2.18 ಟಿ ಎಂ ಸಿ ನೀರನ್ನು ಕುಡಿಯುವ ನೀರಿನ ಉದ್ದೇಶಕ್ಕಾಗಿ ಬಳಸಿಕೊಳ್ಳಲು ಮಲಪ್ರಭಾ ನದಿಗೆ ತಿರುಗಿಸುವ ಬಂಡೂರಿ ನಾಲಾ ತಿರುವು ಯೋಜನೆಗೂ ಆಡಳಿತಾತ್ಮಕ ಅನುಮೋದನೆ ನೀಡಿದೆ.

ಮಹತ್ವಾಕಾಂಕ್ಷೆಯ ಈ ಕಳಸಾ – ಬಂಡೂರಿ ಕುಡಿಯುವ ನೀರಿನ ಯೋಜನೆಗಳ ವಿಸ್ತೃತ ಯೋಜನಾ ವರದಿಗೆ ತಾತ್ವಿಕ ಆಡಳಿತಾತ್ಮಕ ಅನುಮೋದನೆ ನೀಡಿದ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ ಅವರನ್ನು ಜಲಸಂಪನ್ಮೂಲ ಸಚಿವರಾದ ರಮೇಶ್ ಜಾರಕಿಹೊಳಿ ಅವರು ಅಭಿನಂದಿಸಿದ್ದಾರೆ.

ರಾಜ್ಯ ಸರ್ಕಾರವು ಒಂದು ವರ್ಷದ ಅವಧಿಯನ್ನು ಪೂರ್ಣಗೊಳಿಸುತ್ತಿರುವ ಈ ಸುಸಂದರ್ಭದಲ್ಲಿ ಉತ್ತರ ಕರ್ನಾಟಕ ಭಾಗದ ಬಹು ದಿನಗಳ ಬೇಡಿಕೆಯಾಗಿದ್ದ ಈ ಕಳಸಾ ಬಂಡೂರಿ ಕುಡಿಯುವ ನೀರಿನ ಯೋಜನೆಯ ಅನುಷ್ಠಾನಕ್ಕೆ ಈ ಸರ್ಕಾರ ಕಟಿಬದ್ಧವಾಗಿದ್ದು, ಶೀಘ್ರದಲ್ಲಿಯೇ ಮುಖ್ಯಮಂತ್ರಿಯವರೊಂದಿಗೆ ಚರ್ಚಿಸಿ ಈ ಯೋಜನೆಯ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ಎಂದು ರಮೇಶ್ ಜಾರಕಿಹೊಳಿ ತಿಳಿಸಿದರು.

## ಅಪಭ್ರಂಶ ಪದಬಳಕೆ ಅಪಾರ್ಥವನ್ನು ಕಲ್ಪಿಸಲಿದೆ

- ಟಿ.ಎಸ್.ನಾಗಾಭರಣ

ಬೆಂಗಳೂರು, ಜುಲೈ 28 ( ಕರ್ನಾಟಕ ವಾರ್ತೆ ) :

ಇಲಾಖೆಯ ಜಾಲತಾಣದಲ್ಲಿ ಅಪಭ್ರಂಶವಾದ ಕನ್ನಡ ಪದಗಳನ್ನು ಬಳಕೆ ಮಾಡಿರುವುದು ಸಾವಿರಾರು ವರ್ಷಗಳ ಇತಿಹಾಸವನ್ನು ಹೊಂದಿರುವ ಕಸ್ತೂರಿ ಕನ್ನಡವನ್ನು ಅವಮಾನಿಸಿದಂತಾಗಿದೆ. ಕನ್ನಡ ಪದಗಳು ಅಪಭ್ರಂಶವಾದಾಗ ಅದು ಅಪಾರ್ಥಕ್ಕೆ ಎಡೆಮಾಡಿಕೊಡುತ್ತದೆ. ಇಷ್ಟು ಸಣ್ಣ ಮಾಹಿತಿಯೂ ಇಲಾಖೆಯ ಅಧಿಕಾರಿ ವರ್ಗಕ್ಕೆ ಇಲ್ಲದಿದ್ದರೆ ಹೇಗೆ? ಲಕ್ಷಾಂತರ ಮಂದಿಗೆ ಮಾಹಿತಿಯನ್ನು ನೀಡಬೇಕಾದ ಇಲಾಖೆಯೇ ತಪ್ಪು ತಪ್ಪಾಗಿ ಕನ್ನಡ ಬಳಸಿದರೆ ಯಾರಿಗೂ ಸಮರ್ಪಕವಾಗಿ ಅರ್ಥವಾಗುವುದಿಲ್ಲ. ಕೂಡಲೇ ಇದನ್ನು ತಜ್ಞರಿಂದ ಅನುವಾದಿಸಿಕೊಂಡು ಸೂಕ್ತ ರೀತಿಯಲ್ಲಿ ಮಾಹಿತಿಯನ್ನು ಜಾಲತಾಣದಲ್ಲಿ ಪ್ರಕಟಿಸಬೇಕು ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ ಎಸ್ ನಾಗಾಭರಣ ಅವರು ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆಯ ಆಯುಕ್ತರಿಗೆ ಸೂಚಿಸಿದರು.

ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆಯ ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನಾ ಜಾಲಸಂಪರ್ಕ ಸಭೆ ನಡೆಸಿದ ಅವರು, ಇಲಾಖೆಯ ಜಾಲತಾಣದಲ್ಲಿ ತಪ್ಪು ತಪ್ಪಾಗಿ ಪ್ರಕಟಿಸಲಾಗಿರುವ ಕನ್ನಡದ ಮಾಹಿತಿಯನ್ನು ಆನ್ ಲೈನ್ ಮೂಲಕವೇ ಪ್ರದರ್ಶಿಸಿ ನೀವು ಪ್ರಕಟಿಸಲಾಗಿರುವ ಮಾಹಿತಿ ಯಾರಿಗಾದರೂ ಅರ್ಥವಾಗುತ್ತದೆಯೇ ನೋಡಿ. ಅಲ್ಲದೆ ಪ್ರಾಧಿಕಾರದಿಂದ ಕಳುಹಿಸಲಾದ ಸೂಚನಾ ಪತ್ರದ ಮೇಲೆ ಆಂಗ್ಲ ಭಾಷೆಯ ಮೊಹರು ಹಾಕಲಾಗಿದೆ. ಕನ್ನಡದ ಮೊಹರು ಇರಲಿಲ್ಲವೇ? ಬೇಕೆಂದೇ ಈ ಕೆಲಸ ಮಾಡಿದ್ರಾ? ಎಂದು ಅಧ್ಯಕ್ಷರು ಬೇಸರ ವ್ಯಕ್ತಪಡಿಸಿದರು.

ಇಲಾಖೆಯ ಭೂದಾಖಲಾತಿ ಗಳನ್ನು ವ್ಯವಸ್ಥಿತವಾಗಿ ನಿರ್ವಹಿಸುವ ಕೆಲಸದ ಉಸ್ತುವಾರಿಯನ್ನು ಆಯುಕ್ತರು ಸಮರ್ಪಕ ವಾಗಿ ನೋಡಿಕೊಳ್ಳಬೇಕು. ಅಲ್ಲದೆ ಎಲ್ಲ ಮಾಹಿತಿಗಳು ಸಂಪೂರ್ಣವಾಗಿ ಕಡ್ಡಾಯವಾಗಿ ಕನ್ನಡದಲ್ಲೇ ಇರಬೇಕು. ಇದು ಸರ್ಕಾರದ ಆದೇಶ ಕೂಡ. ಈಗ ನೀವು ಮಾಡಲಾಗಿರುವ ಲೋಪಗಳು ಸರ್ಕಾರದ ಕನ್ನಡ ಭಾಷಾನೀತಿಯನ್ನು ಸ್ಪಷ್ಟವಾಗಿ ಉಲ್ಲಂಘಿಸಿದಂತಾಗಿದೆ. ಇದನ್ನು ಕೂಡಲೇ ಸರಿಪಡಿಸಿಕೊಳ್ಳಬೇಕು ಅಲ್ಲದೆ ಮಾದರಿ ಜಾಲತಾಣವನ್ನು ರೂಪಿಸಿಕೊಂಡು ಕಾಲಕಾಲಕ್ಕೆ ಪರಿಷ್ಕೃತ ಮಾಹಿತಿಗಳನ್ನು ಒದಗಿಸುವಂತೆ ಸಲಹೆ ನೀಡಿದರು.

ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆಯಿಂದ ಸೂಕ್ತ ರೀತಿಯಲ್ಲಿ ರೈತರಿಗೆ, ಜನಸಾಮಾನ್ಯರಿಗೆ ಮಾಹಿತಿ ದೊರೆತಲ್ಲಿ ಮಧ್ಯವರ್ತಿಗಳ ಹಾವಳಿಯನ್ನು ತಡೆಯಬಹುದಾಗಿದೆ. ಕನ್ನಡವನ್ನು ಆಡಳಿತದಲ್ಲಿ ಯಥೇಚ್ಚವಾಗಿ ಬಳಸುವುದು ಎಂದರೆ ಪಾರದರ್ಶಕ ಆಡಳಿತಕ್ಕೆ ಮುನ್ನುಡಿ ಬರೆದಂತೆ. ತಮ್ಮ ಇಲಾಖೆಯ ಯಾವುದೇ ಜಾಲತಾಣಕ್ಕೆ ಭೇಟಿ ಕೊಟ್ಟರೂ ಸಹ ಎಲ್ಲ ಮಾಹಿತಿಗಳು ಒಂದೇ ಕಡೆ ಸುಲಭವಾಗಿ ದೊರೆಯುವಂತಾಗಬೇಕು ಎಂದರು.

ಮಾನ್ಯ ಮುಖ್ಯಮಂತ್ರಿಗಳ ಆಡಳಿತ ಸಲಹೆಗಾರರಾದ ಬೇಳೂರು ಸುದರ್ಶನ ಅವರು ಮಾದರಿ ಜಾಲತಾಣಗಳ ರೂಪಿಸುವಿಕೆ ಮತ್ತು ನೀತಿ-ನಿರೂಪಣೆ ಗಳ ಬಗ್ಗೆ ಅಧಿಕಾರಿಗಳಿಗೆ ಮಾಹಿತಿ ನೀಡಿದರು.

ಪ್ರಾಧಿಕಾರದ ರಾಜ್ಯ ಸದಸ್ಯರಾದ ಶ್ರೀ ರೋಹಿತ್ ಚಕ್ರತೀರ್ಥ ಅವರು ಮಾತನಾಡಿ, ನೂರಾರು ವರ್ಷಗಳಿಂದ ಕಂದಾಯ ಇಲಾಖೆ ಪಾರ್ಸಿ, ಉರ್ದು ಮರಾಠಿ ಪದಗಳನ್ನು ಆಡಳಿತದಲ್ಲಿ ಬಳಸುತ್ತಿದೆ. ಅದಕ್ಕೆ ಪರ್ಯಾಯವಾಗಿ ಕನ್ನಡದ ಪದಗಳನ್ನು ಬಳಸುವ ಬಗ್ಗೆ ಅಧಿಕಾರಿ ವರ್ಗದವರು ಗಮನಿಸಬೇಕಿದೆ. ಆ ಮೂಲಕ ಇಲಾಖೆ ಕನ್ನಡವನ್ನು ಉತ್ತೇಜಿಸುವ ಕೆಲಸಗಳನ್ನು ಆಗು ಮಾಡಬೇಕಿದೆ ಎಂದು ಅಭಿಪ್ರಾಯಪಟ್ಟರು.

ಭೂಮಾಪನ ಕಂದಾಯ ಮತ್ತು ಭೂದಾಖಲೆಗಳ ಇಲಾಖೆಯ ಆಯುಕ್ತರಾದ ಕೆಪಿ ಮೋಹನ್ ರಾಜ್, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ. ಕೆ. ಮುರಳಿಧರ, ಅಧ್ಯಕ್ಷರ ಆಪ್ತಕಾರ್ಯದರ್ಶಿ ಡಾ.ವೀರಶೆಟ್ಟಿ ಮತ್ತಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಶಾಲೆಗಳು ತೆರೆಯಲು ಅವಸರವಿಲ್ಲ: ಸಚಿವ ಸುರೇಶ್‌ಕುಮಾರ್

**ಶಿಕ್ಷಣ ಕ್ಷೇತ್ರದಲ್ಲಿ ತೊಡಗಿಸಿಕೊಂಡ 36ಕ್ಕೂ ಹೆಚ್ಚು ಸರ್ಕಾರೇತರ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಶಿಕ್ಷಣ ಸಚಿವರ ವೆಬಿನಾರ್ ಸಂವಾದ**

ಬೆಂಗಳೂರು, ಜುಲೈ 28 ( ಕರ್ನಾಟಕ ವಾರ್ತೆ ) :

ಕೊರೋನಾ ಸಾಂಕ್ರಾಮಿಕ ಪ್ರಸರಣದ ಈ ಕಾಲಘಟ್ಟದಲ್ಲಿ ಶಾಲೆಗಳನ್ನು ತೆರೆಯುವ ಅವಸರ ಸರ್ಕಾರದ ಮುಂದಿಲ್ಲ ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವಎಸ್. ಸುರೇಶ್‌ಕುಮಾರ್ ಹೇಳಿದ್ದಾರೆ.

ಕೊರೋನಾ ಸಾಮಾಜಿಕ ಸಂದರ್ಭದಲ್ಲಿ ಆನ್‌ಲೈನ್ ಶಿಕ್ಷಣ ಮತ್ತು ಶಾಲಾ ಚಟುವಟಿಕೆಗಳನ್ನು ಪ್ರಾರಂಭಿಸುವ ನಿಟ್ಟಿನಲ್ಲಿ ಮಂಗಳವಾರ ಶೈಕ್ಷಣಿಕ ವಲಯದಲ್ಲಿ ತೊಡಗಿಸಿಕೊಂಡಿರುವ ಸರ್ಕಾರೇತರ ಸಂಘಟನೆಗಳ ಪ್ರತಿನಿಧಿಗಳೊಂದಿಗೆ ನಡೆಸಿದ ವೆಬಿನಾರ್ ಸಂವಾದದಲ್ಲಿ ಮಾತನಾಡಿದ ಅವರು, ಈ ಸಾಮಾಜಿಕ ಪರಿಸ್ಥಿತಿಯಲ್ಲಿ ಮಕ್ಕಳ ಹಿತದೃಷ್ಟಿಯಿಂದ ಅವಸರದಲ್ಲಿ ಶಾಲೆ ತೆರೆಯುವುದಿಲ್ಲವಾದರೂ ಮಕ್ಕಳನ್ನು ಕಲಿಕೆಯಲ್ಲಿ ತೊಡಗಿಸಿಕೊಳ್ಳುವಲ್ಲಿ ಎಲ್ಲ ಆಯಾಮಗಳಿಂದಲೂ ಪ್ರಯತ್ನ ಮಾಡಲಾಗುತ್ತದೆ ಎಂದರು.

ವಿವಿಧ ಸರ್ಕಾರೇತರ 36ಕ್ಕೂ ಹೆಚ್ಚು ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ ವೆಬಿನಾರ್‌ನಲ್ಲಿ ಇಂತಹ ಪರಿಸ್ಥಿತಿಯಲ್ಲಿ ಯಾವ ರೀತಿಯಲ್ಲಿ ಮಕ್ಕಳ ಕಲಿಕೆಯ ನಿರಂತರತೆಗೆ ಮಾಡಬಹುದಾದ ಮತ್ತು ತಮ್ಮ ತಮ್ಮ ವ್ಯಾಪ್ತಿಯಲ್ಲಿ ತಾವು ಕೈಗೊಂಡಿರುವ ವಿವಿಧ ಉಪಕ್ರಮಗಳನ್ನು ಆಲಿಸಿದ ಸಚಿವರು ಇಂತಹ ಪರಿಸ್ಥಿತಿ ಇದೇ ಮೊದಲ ಬಾರಿ ಬಂದೆರಗಿರುವುದರಿಂದ ಆ ನಿಟ್ಟಿನಲ್ಲಿ ಮಕ್ಕಳನ್ನು ತಲುಪಲು ಸಾಧ್ಯವಾಗಬಹುದಾದ ಎಲ್ಲ ಪ್ರಯತ್ನಗಳನ್ನು ಶಿಕ್ಷಣ ಇಲಾಖೆ ಚಿಂತನೆ ನಡೆಸಿದೆ ಎಂದರು.

ವಠಾರ ಶಾಲೆ, ಪಡಸಾಲೆ ಶಾಲೆ, ಮನೆಶಾಲೆ, ತಂತ್ರಜ್ಞಾನಾಧಾರಿತ ಶಿಕ್ಷಣ, ಆಕಾಶವಾಣಿ, ಚಂದನ ದೂರದರ್ಶನ ವಾಹಿನಿ, ಖಾಸಗಿ ವಾಹಿನಿ, ಶಿಕ್ಷಣ ಇಲಾಖೆಯ ಚಾನೆಲ್ ಸೇರಿದಂತೆ ಲಭ್ಯವಾಗಬಹುದಾದ ಎಲ್ಲ ಅವಕಾಶವನ್ನೂ ಮುಕ್ತವಾಗಿರಿಸಿಕೊಂಡು ಶಿಕ್ಷಣ ಇಲಾಖೆ ಎಲ್ಲ ಉಪಕ್ರಮಗಳತ್ತಲೂ ಮಕ್ಕಳ ಹಿತದೃಷ್ಟಿಯಿಂದ ಯೋಚಿಸುತ್ತಿದೆ ಎಂದು ಅವರು ಹೇಳಿದರು.

ಈ ಎಲ್ಲ ಸಾಮೂಹಿಕವಾದ ಪ್ರಯತ್ನಗಳು ಗಟ್ಟಿರೂಪ ಪಡೆದು ವಿಕೇಂದ್ರಿಕೃತ ಕಲಿಕೆಯು ಮಕ್ಕಳಿಗೆ ಉಪಯುಕ್ತವಾಗುವ ರೀತಿಯಲ್ಲಿ ನಮ್ಮ ಪ್ರಯತ್ನಗಳು ಇರಬೇಕೆನ್ನುವ ಅಭಿಪ್ರಾಯಗಳು ನಾವು ಮುಂದಿನ ದಿನಗಳಲ್ಲಿ ತೆಗೆದುಕೊಳ್ಳಬಹುದಾದ ನಿರ್ಣಯಗಳಿಗೆ ಒಂದು ಸ್ಪಷ್ಟ ದಿಕ್ಕನ್ನು ಮೂಡಿಸಿವೆ. ಈ ಎಲ್ಲ ಸಲಹೆಗಳನ್ನು ಕ್ರೂಢೀಕರಿಸಿ ದಾಖಲಿಸಿ ಆಯಾ ಸಂದರ್ಭ, ಆಯಾ ಪ್ರದೇಶಕ್ಕನುಗುಣವಾಗಿ ಜಾರಿಯಲ್ಲಿಡುವ ಬಗ್ಗೆಯೂ ಚಿಂತನೆ ನಡೆಸಲಾಗುವುದು ಎಂದು ಸುರೇಶ್‌ಕುಮಾರ್ ಅಭಿಪ್ರಾಯಪಟ್ಟರು.

ಅಜೀಂ ಪ್ರೇಮ್‌ಜಿ ಪ್ರತಿಷ್ಠಾನ, ಗ್ರಾಮ್ಸ್, ಅಕ್ಷರ ಫೌಂಡೇಷನ್, ಯೂನಿಸೆಫ್, ಶಿಕ್ಷಣ, ಸಿಇಇ (ವಾಷ್ ಪ್ರೋಗ್ರಾಂ), ಪೋತ್‌ವೇವ್ ಫೌಂಡೇಷನ್, ಪ್ರಥಮ್, ಪ್ರಜಾಯತ್ನ, ಅಗಸ್ತ್ಯ ಫೌಂಡೇಷನ್, ಲೆಂಡ್ ಎ ಹ್ಯಾಂಡ್‌ಇಂಡಿಯಾ, ವೈಟ್‌ಫೀಲ್ಡ್‌ರೆಡಿ ಸಮೃದ್ಧಿ ಟ್ರಸ್ಟ್, ಇಂಡಿಯನ್ ಲಿಟ್ರೆಸಿ ಪ್ರಾಜೆಕ್ಟ್, ಬಿಜಿವಿಎಸ್, ಎಸ್‌ಟಿಐಆರ್, ಏಕ್ ಸ್ಟೆಪ್–ದೀಕ್ಷಾ, ರೂಂಟುರೀಡ್‌ಇಂಡಿಯಾಟ್ರಸ್ಟ್, ಗ್ರಾಮ್, ಐ.ಎಲ್.ಪಿ. ಸೇರಿದಂತೆ ಹಲವಾರು ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

ಸಂವಾದದಲ್ಲಿ ಭಾಗವಹಿಸಿದ ಎಲ್ಲ ಸಂಸ್ಥೆಗಳ ಹಿತದೃಷ್ಟಿಯೂ ನಮ್ಮ ಮಕ್ಕಳೇ ಪ್ರಮುಖವಾಗಿದ್ದರಿಂದ ಅವರನ್ನು ಈ ಪರಿಸ್ಥಿತಿಯಲ್ಲಿ ಕಲಿಕೆಯಲ್ಲಿ ತೊಡಗಿಸಿಕೊಳ್ಳುವಲ್ಲಿ ಎಲ್ಲ ರೀತಿಯ ಸಾಧ್ಯತೆಗಳನ್ನು ಕ್ರೋಢೀಕರಿಸಿಕೊಂಡು ಅವಕಾಶವಾಗುವ ಯಾವುದೇ ಸೌಲಭ್ಯದ ಮೂಲಕವಾಗಲಿ ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸಲು ಸರ್ಕಾರ ಮುಂದಾಗಬೇಕು ಎಂಬ ಅಭಿಪ್ರಾಯ ವ್ಯಕ್ತವಾಯಿತು.

**ಸಂವಾದದಲ್ಲಿ ವ್ಯಕ್ತವಾದ ಅಭಿಪ್ರಾಯಗಳು ಕೆಳಕಂಡಂತಿವೆ:**

- ಯೂ–ಟ್ಯೂಬ್, ವಾಟ್ಸಪ್ ಸೇರಿದಂತೆ ಯಾವುದರ ಮೂಲಕವೇ ಆದರೂ ಮಕ್ಕಳು ಕಲಿಕೆಯಲ್ಲಿ ತೊಡಗಿಸಿಕೊಳ್ಳಬೇಕು. ಮಕ್ಕಳು ಹೆಚ್ಚು ದಿನ ಐಡಲ್ ಆಗಿ ಇರುವಂತಾಗಬಾರದು. ನೇರ ಪ್ರಸಾರ, ರೆಕಾರ್ಡೆಡ್ ಪಾಠದ ಮಾದರಿಯ ತರಗತಿಗಳೂ ಆಗಬಹುದು.
- ಶಾಲೆಗಳ ಗ್ರಂಥಾಲಯಕ್ಕೆ ದಿನ ಬಿಟ್ಟು ದಿನ ಮಕ್ಕಳು ಬಂದು ಪಾಠ ಪಡೆದುಅದನ್ನು ಓದಿ ಮತ್ತೊಂದು ದಿನ ಬಂದು ಅದನ್ನು ಒಪ್ಪಿಸುವುದು.
- ಈ ಹಂತದಲ್ಲಿ ಸಿಲೆಬಸ್ ಮುಖ್ಯವಲ್ಲ, ಕಲಿಕೆಯ ಅಂತರವನ್ನು ನಿವಾರಿಸುವುದು ಮುಖ್ಯವಾಗಬೇಕು. ಅದಕ್ಕಾಗಿ ಪಠ್ಯೇತರ ಚಟುವಟಿಕೆಗಳೇ ಆದರೂ ಸರಿ. ಅವುಗಳನ್ನೇ ಕಲಿಸುವ ಪ್ರಯತ್ನ ನಡೆಯಬೇಕು.
- ಪ್ರಸ್ತುತ ಶೈಕ್ಷಣಿಕ ವರ್ಷ ಮತ್ತು ಮುಂದಿನ ಶೈಕ್ಷಣಿಕ ವರ್ಷದ ಪಠ್ಯದ ಕುರಿತು ಒಂದು ಹೈಬ್ರಿಡ್ ಪ್ಲಾನ್ ಮಾಡಿ ಮಕ್ಕಳನ್ನು ತಲುಪುವುದೊಳಿತು.
- ಸಮುದಾಯ ಆಧಾರಿತ ಕೇಂದ್ರಗಳು, ನೆರೆಹೊರೆ ಮಕ್ಕಳ ಗುಂಪು, ಗ್ರಾಮದಲ್ಲಿರುವ ಶಿಕ್ಷಕರು, ಶಿಕ್ಷಕ ಪದವೀಧರರು, ಶಿಕ್ಷಕ ತರಬೇತಿ ಪಡೆದವರು, ಸ್ವಯಂ ಸೇವಕರನ್ನು ಈ ಹಂತದಲ್ಲಿ ಬಳಸಿಕೊಳ್ಳಬೇಕು.
- ಇಂತಹ ಪ್ರಯತ್ನಜಾರಿಯಲ್ಲಿ ಆಯಾಗ್ರಾಮ ಪಂಚಾಯ್ತಿ ಸದಸ್ಯರು, ಅಧಿಕಾರಿಗಳನ್ನು ಬಳಸಿಕೊಂಡು ಪರಿಣಾಮಕಾರಿಯಾಗಿ ಹೆಜ್ಜೆ ಇಡಬೇಕು.

- ಕೋವಿಡ್ ಒಂದು ಅವಕಾಶವೆಂದು ಪರಿಗಣಿಸಿ ಆ ಸಮಯದಲ್ಲಿ ಮಕ್ಕಳನ್ನು ಕೇವಲ ಪಠ್ಯಕ್ಕೆ ಸೀಮಿತಗೊಳಿಸದೇ ಇತರೆ ಚಟುವಟಿಕೆಗಳಲ್ಲಿ ತೊಡಗಿಸಲು ಮುಂದಾಗಬೇಕು.
- ತಂತ್ರಜ್ಞಾನಾಧಾರಿತ ಶಿಕ್ಷಣ ನೀಡುವಾಗಅದು ಮಕ್ಕಳಿಗೆ ಸಮರ್ಪಕಾಗಿ ತಲುಪುತ್ತಿದೆಯೇ ಇಲ್ಲವೇ ಎಂಬ ಬಗ್ಗೆ ಮಾನಿಟರ್ ಮಾಡುವ ವ್ಯವಸ್ಥೆ ಸಹ ಮುಖ್ಯವಾಗುತ್ತದೆ.
- ಸದ್ಯದ ಪರಿಸ್ಥಿತಿಯಲ್ಲಿ ಶಾಲೆಗಳು ಆರಂಭಿಸುವ ಸಾಧ್ಯತೆಗಳು ಇಲ್ಲದಿರುವ ಹಿನ್ನೆಲೆಯಲ್ಲಿ ಲಭ್ಯವಿರುವ ಸಂಪನ್ಮೂಲಗಳ ಆಧಾರದಲ್ಲಿ ವಿಕೇಂದ್ರೀಕರಣಗೊಳಿಸಿ ಮಕ್ಕಳ ಹಿತದೃಷ್ಟಿಯಿಂದ ಪರ್ಯಾಯ ಕಲಿಕಾ ಚಟುವಟಿಕೆಗಳನ್ನು ಅನುಷ್ಠಾನಗೊಳಿಸಲು ಮುಂದಾಗಬೇಕು.
- ತಜ್ಞರ ಅಭಿಪ್ರಾಯಗಳೇನೇ ಇರಲಿ, ಒಟ್ಟಾರೆ ನಾಡಿನ ಮಕ್ಕಳ ಹಿತದೃಷ್ಟಿಯಿಂದ ಕಲಿಕಾ ಚಟುವಟಿಕೆಗಳನ್ನು ಆರಂಭಿಸುವುದು ಒಳ್ಳೆಯದು. ಮಕ್ಕಳು ಶೈಕ್ಷಣಿಕ ಚಟವಟಿಕೆಯಿಂದ ಹೆಚ್ಚು ದಿನಗಳು ವಿಮುಖವಾಗುವುದು ಅಷ್ಟು ಉಚಿತವಲ್ಲವಾದ್ದಾರಿಂದ ಯಾವುದಾದರೂ ರೀತಿಯಿಂದ ಅವರಿಗೆ ತರಗತಿಗಳು ತಲುಪುವಂತಾಗಬೇಕು. ಕೊರೋನಾ ಪರಿಸ್ಥಿತಿ ತಿಳಿಗೊಳ್ಳುವುದು ತಡವಾಗಬಹುದಾದರೂ ಶಾಲೆಗಳು ಇಲ್ಲವೇ ಕಲಿಕೆ ಒಮ್ಮೆ ಶುರುವಾದರೆ ಸಮಸ್ಯೆಗಳು ಒಂದು ಹಂತಕ್ಕೆ ಪರಿಹಾರದೊರೆಯಬಹುದು.
- ಪ್ರಯತ್ನಗಳತ್ತಲೇ ನಾವು ಚಿಂತಿಸುತ್ತಾಕೂರುವ ಬದಲು ಅವುಗಳನ್ನು ಜಾರಿಗೆತಂದು ಮಕ್ಕಳನ್ನು ತಲುಪುವುದಕ್ಕೆ ಮೊದಲ ಆದ್ಯತೆ ನೀಡಬೇಕಾದಅಗತ್ಯ ಹೆಚ್ಚಾಗಿದೆ.
- ಆಯಾ ಪರಿಸ್ಥಿತಿಯಲ್ಲಿ ಲಭ್ಯವಿರುವಯಾವುದೇ ಅವಕಾಶ ಇಲ್ಲವೇ ಸೌಲಭ್ಯವನ್ನೂ ಈ ಸಂದರ್ಭದಲ್ಲಿ ಬಳಸಿಕೊಳ್ಳುವುದು ಒಳ್ಳೆಯದು. ಪ್ರಸ್ತುತ ಸಂದರ್ಭದಲ್ಲಿಯೂ ಗ್ರಾಮಗಳಲ್ಲಿ ಮಕ್ಕಳು ತಮ್ಮ ಶಾಲೆ ಬಳಿಯೇ ಬಂದು ದಿನಂಪ್ರತಿ ಆಟವಾಡುತ್ತಿದ್ದಾರೆ. ಮಕ್ಕಳಿಗೆ ಶಾಲಾ ತರಗತಿಗಳೇ ಅಚ್ಚುಮೆಚ್ಚು. ಸುರಕ್ಷಿತ ವಾತಾವರಣವೆಂದು ಕಂಡುಬಂದ ಕಡೆಗಳಲ್ಲಿಶಾಲಾ ತರಗತಿಗಳನ್ನೇ ಪ್ರಾರಂಭಿಸಿದರೆ ತಪ್ಪೇನು ಇಲ್ಲ.
- ಆಯಾ ಪ್ರದೇಶದಲ್ಲಿ ಆಯಾ ನೆಲೆಯಲ್ಲಿ ಸಾಧ್ಯವಾಗಬಹುದಾದ ಆವಕಾಶಗಳನ್ನು ಬಳಸಿಕೊಳ್ಳಲು ಸರ್ಕಾರ ಮುಂದಾಗಬೇಕು.

ಸಂವಾದದಲ್ಲಿಸರ್ಕಾರೇತರ ಸಂಸ್ಥೆಗಳ ಪ್ರತಿನಿಧಿಗಳು, ಹಿರಿಯ ಶಿಕ್ಷಣ ತಜ್ಞರಾದ ಎಂ.ಕೆ. ಶ್ರೀಧರ್, ಡಾ. ಗುರುರಾಜ ಕರ್ಜಗಿ, ಡಾ. ವಿ.ಪಿ. ನಿರಂಜನಾರಾಧ್ಯ, ಪ್ರಾಥಮಿಕ ಶಿಕ್ಷಣ ಇಲಾಖೆ ಪ್ರಧಾನ ಕಾರ್ಯದರ್ಶಿ ಎಸ್.ಆರ್. ಉಮಾಶಂಕರ್, ಶಿಕ್ಷಣ ಇಲಾಖೆ ಆಯುಕ್ತ ಡಾ. ಕೆ.ಜಿ.ಜಗದೀಶ್, ಸಮಗ್ರ ಶಿಕ್ಷಣ ಕರ್ನಾಟಕ ರಾಜ್ಯ ಯೋಜನಾಧಿಕಾರಿ ದೀಪಾ ಚೋಳನ್ ಭಾಗವಹಿಸಿದ್ದರು.

## ಸಚಿವರ ಪ್ರವಾಸ

ಬೆಂಗಳೂರು, ಜುಲೈ 28 ( ಕರ್ನಾಟಕ ವಾರ್ತೆ ) :

ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೆ. ಗೋಪಾಲಯ್ಯ ಅವರು ಜುಲೈ 29 ರಂದು ಹಾಸನ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರ ಸ್ಥಾನಕ್ಕೆ ಹಿಂದಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.